# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/37/12-13 ದಿನಾಂಕ :16/08/2016

ಉಪಸ್ಥಿತರು: **ಶ್ರೀಲೋಕೇಶ್.ಪಿ.ಎನ್.** (ಕ.ಆ.ಸೇ)

**ಸಹಾಯಕ ಆಯುಕ್ತರು, ಬಳ್ಳಾರಿ.**

| . ವಾದಿಗಳು | ಪ್ರತಿವಾದಿಗಳು |
|---|---|
| 1.ಶ್ರೀಮತಿ ಹುಸೇನಮ್ಮ ಗಂಡ ಕಲ್ಲರ್ ಹುಸೇನಪ್ಪ,<br>2.ಶ್ರೀಮತಿ ನರಸಮ್ಮ ಗಂಡ ಸಾಯಿಬಣ್ಣ ನಾಗಲಾಪುರ ಗ್ರಾಮ , ಸಿರುಗುಪ್ಪ ತಾಲ್ಲೂಕು<br><br>(ಶ್ರೀ ಜಿ.ವೀರೇಶ್,ವಕೀಲರು,ಬಳ್ಳಾರಿ) | 1.ತಹಶೀಲ್ದಾರರು,ಸಿರುಗುಪ್ಪ<br>2.ಕಂದಾಯ ನಿರೀಕ್ಷಕರು,ಸಿರುಗುಪ್ಪ<br>3.ಗ್ರಾಮಲೆಕ್ಕಾಧಿಕಾರಿಗಳು,ನಾಗಲಾಪುರ<br>4.ಶ್ರೀ ಕಲ್ಲರ್ ಹುಸೇನಪ್ಪ,ತಂದೆ ಲೇಟ್ ಹಂಪಯ್ಯ<br>5.ಕುರುಬರ ಹುವ್ವಪ್ಪ ತಂದೆ ಸತ್ಯಪ್ಪ,ಕುಮಾರಸ್ವಾಮಿ ಲೇಔಟ್, ಸಿರುಗುಪ್ಪ. |

**ದಾವಾ ಜಮೀನಿನ ವಿವರ :-**

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಸಿರುಗುಪ್ಪ | ಕುಡುದರಹಾಳು | 68/ಬಿ5ಎ, 69 | 2.40, 1.60 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು ಸಿರುಗುಪ್ಪ ಇವರ ಎಂ.ಆರ್.ನಂ.50/11-12 ದಿನಾಂಕ: 25.01.2012 ರ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಟಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 30.10.2012, 18.12.2012, 12.03.2013, 19.03.2013, 25.02.2014, 21.07.2015, 16.08.2016 ಗಳಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಅವರ ವಕೀಲರ ಮುಖಾಂತರ ಈ ನ್ಯಾಯಾಲಯಕ್ಕೆ ಹಾಜರಾಗಿ, ಸಿರುಗುಪ್ಪ ತಾಲ್ಲೂಕಿನ ಕುಡುದರಹಾಳು ಗ್ರಾಮದ ಸ.ನಂ. 68/ಬಿ5ಎ, 69 ವಿಸ್ತೀರ್ಣ 2.40, 1.60 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು ಸಿರುಗುಪ್ಪ ಇವರ ಎಂ.ಆರ್.ನಂ.50/11-12 ದಿನಾಂಕ: 25.01.2012 ರನ್ವಯ ಹಕ್ಕು ಬದಲಾವಣೆ ಮಂಜೂರು ಮಾಡಿರುವುದರ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ.ದಿನಾಂಕ: 16.08.2016 ವಾದಿಪರ ವಕೀಲರು ಹಾಜರಾಗಿ ವಾದಿ ಮತ್ತು ಪ್ರತಿವಾದಿಗಳು ಪ್ರಸ್ತಾಪಿತ ಜಮೀನುಗಳಿಗೆ ಸಂಬಂಧಿಸಿದಂತೆ ಸಿರುಗುಪ್ಪ ತಾಲ್ಲೂಕಿನ ಜೆ.ಎಂ.ಫ್.ಸಿ ನ್ಯಾಯಾಲಯದ ಆದೇಶ ಸಂಖ್ಯೆ 113/2012 ರಂತೆ ಪ್ರಕರಣ ಇತ್ಯರ್ಥ ಪಡಿಸಿಕೊಂಡಿರುವುದಾಗಿ ತಿಳಿಸಿ, ಮೇಲ್ಮನವಿಯನ್ನು ಹಿಂಪಡೆಯಲು ಕೋರಿ ಈ ನ್ಯಾಯಾಲಯಕ್ಕೆ (NOT PRESS MEMO) ನ್ನು ಸಲ್ಲಿಸಿರುತ್ತಾರೆ.

ಕಾರಣ ಸದರಿ ಪ್ರಕರಣವನ್ನು ನ್ಯಾಯಾಲಯದಲ್ಲಿ ಇತ್ಯರ್ಥ ಪಡಿಸಿಕೊಂಡಿರುವುದಾಗಿ ತಿಳಿಸಿ, ವಾದಿಪರ ವಕೀಲರು ಮೆಮೋ (NOT PRESS MEMO) ಸಲ್ಲಿಸಿರುವ ಮೇರೆಗೆ ಹಾಗೂ ಮುಕ್ತಾಯಗೊಳಿಸಲು ಕೋರಿ ಸಹಿ ಮಾಡಿ ಒಪ್ಪಿಗೆಯನ್ನು ಸೂಚಿಸಿರುವುದರಿಂದ ಈ ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಈ ಕೆಳಕಂಡಂತೆ ಆದೇಶ

ಮುಂದಿನ ಪುಟಕ್ಕೆ.....

:: ಆದೇಶ ::

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಸಿರುಗುಪ್ಪ ತಾಲ್ಲೂಕಿನ ಕುಡುದರಹಾಳು ಗ್ರಾಮದ ಸ.ನಂ. 68/ಬಿ5ಎ, 69 ವಿಸ್ತೀರ್ಣ 2.40, 1.60 ಎಕರೆ ಜಮೀನಿಗೆ ಸಂಬಂಧಿಸಿದಂತೆ ವಾದಿಗಳು ಸಲ್ಲಿಸಿರುವ (NOT PRESS MEMO) ರ ಮೇರೆಗೆ ಪ್ರಕರಣವನ್ನು ಇದೆ ಹಂತದಲ್ಲಿ ಮುಕ್ತಾಯಗೊಳಿಸಿ ಪ್ರಕರಣವನ್ನು ವಜಾ ಮಾಡಿ ಆದೇಶಿಸಲಾಗಿದೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ನ್ಯಾಯಾಲಯದಿಂದ ದಿನಾಂಕ:26.02.2014 ರಂದು ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಿ,ಆದೇಶಿಸಿದೆ.

ಈ ಆದೇಶವನ್ನು ಹೇಳಿ, ಬರೆಯಿಸಿ ತಪ್ಪುಗಳನ್ನು ತಿದ್ದಿ **ದಿನಾಂಕ: 16.08.2016** ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,
ಬಳ್ಳಾರಿ

ಸಹಾಯಕ ಆಯುಕ್ತರು,
ಬಳ್ಳಾರಿ.